Akashvani: Bangalore
National Bulletin In Kannada
16.04.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

16.04.2026: 13.10hrs

********

**ಮುಖ್ಯಾಂಶಗಳು :**

1. ಲೋಕಸಭೆ ವಿಶೇಷ ಅಧಿವೇಶನ ; ಮಹಿಳಾ ಮೀಸಲಾತಿ ಮತ್ತು ವಿವಿಧ ಮಸೂದೆಗಳ ಮಂಡನೆ
2. ಕೇಂದ್ರ ಸರ್ಕಾರದಿಂದ ಜನಗಣತಿ ೨೦೨೭ ; ಮೊದಲ ಹಂತದ ಕಾರ್ಯಾಚರಣೆ ಇಂದಿನಿಂದ ಆರಂಭ
3. ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಭೀಕರ ರಸ್ತೆ ಅಪಘಾತ ; ೮ ಮಂದಿ ಸಾವು, ರಾಷ್ಟ್ರಪತಿ ದ್ರೌಪದಿ ಮುರ್ಮು ಸೇರಿದಂತೆ ಗಣ್ಯರಿಂದ ತೀವ್ರ ಸಂತಾಪ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಮುಂಬೈ ಇಂಡಿಯನ್ಸ್-ಪಂಜಾಬ್ ಕಿಂಗ್ಸ್ ತಂಡಗಳ ನಡುವೆ ಹಣಾಹಣಿ

*********

ಸಂಸತ್ತಿನ ವಿಸ್ತೃತ ಬಜೆಟ್ ಅಧಿವೇಶನದ ಮೂರು ದಿನಗಳ ವಿಶೇಷ ಸಭೆಯು ಇಂದು ಆರಂಭವಾಯಿತು. ಲೋಕಸಭೆಯಲ್ಲಿ ಕೇಂದ್ರ ಕಾನೂನು ಸಚಿವ ಅರ್ಜುನ್ ಮೇಘವಾಲ್ ಅವರು ಸಂವಿಧಾನ  ಮಸೂದೆ, ೨೦೨೬' ಮತ್ತು 'ಕ್ಷೇತ್ರ ಮರುವಿಂಗಡಣೆ ಮಸೂದೆ, ೨೦೨೬' ಅನ್ನು ಮಂಡಿಸಲು ಪ್ರಯತ್ನಿಸಿದರು. ಗೃಹ ಸಚಿವ ಅಮಿತ್ ಶಾ ಅವರು 'ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ ಮಸೂದೆ, ೨೦೨೬' ಅನ್ನು ಸದನದಲ್ಲಿ ಮಂಡಿಸಲು ಮುಂದಾದರು. ಕಾಂಗ್ರೆಸ್ ಸಂಸದ ಕೆ.ಸಿ. ವೇಣುಗೋಪಾಲ್ ಅವರು, ಈ ಮಸೂದೆಗಳ ಮಂಡನೆಯನ್ನು ವಿರೋಧಿಸಿ, ಇವು ದೇಶದ ಒಕ್ಕೂಟ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತವೆ ಎಂದು ಆರೋಪಿಸಿದರು. ಇದಕ್ಕೆ ಬಲವಾಗಿ ಪ್ರತ್ಯುತ್ತರ ನೀಡಿದ ಗೃಹ ಸಚಿವ ಅಮಿತ್ ಶಾ, ಮಸೂದೆ ಮಂಡನೆಯ ಸಂದರ್ಭದಲ್ಲಿ ವೇಣುಗೋಪಾಲ್ ಅವರು ಕೇವಲ ತಾಂತ್ರಿಕ ಆಕ್ಷೇಪಣೆಗಳನ್ನು ಮಾತ್ರ ಎತ್ತಬಹುದು, ಆದರೆ

ಮಸೂದೆಯ ಗುಣಲಕ್ಷಣಗಳ ಬಗ್ಗೆ ಮಾತನಾಡಲು ಸಾಧ್ಯವಿಲ್ಲ ಎಂದು ಹೇಳಿದರು. ಸಮಾಜವಾದಿ ಪಕ್ಷದ ಸಂಸದ ಅಖಿಲೇಶ್ ಯಾದವ್ ಅವರು, ಮೊದಲು ಜನಗಣತಿ ನಡೆಯಲಿ ಎಂದು ಹೇಳುತ್ತಾ, ಇಷ್ಟು ಅವಸರವಾಗಿ ಮಸೂದೆಗಳನ್ನು ತರುವ ಅಗತ್ಯವನ್ನು ಪ್ರಶ್ನಿಸಿದರು. ಟಿಎಂಸಿಯ ಕಾಕೋಲಿ ಘೋಷ್ ದಸ್ತಿದಾರ್ ಅವರು ಮಸೂದೆಯನ್ನು ವಿರೋಧಿಸಿ, ಮಹಿಳಾ ಮೀಸಲಾತಿಯನ್ನು ಭವಿಷ್ಯದ ಕ್ಷೇತ್ರ ಮರುವಿಂಗಡಣಾ ಪ್ರಕ್ರಿಯೆಯ ಮೇಲೆ ಅವಲಂಬಿತವಾಗುವಂತೆ ಮಾಡಲಾಗುತ್ತಿದೆ ಎಂದು ಹೇಳಿದರು.

*********

ರಾಜ್ಯಸಭೆಯ ಬಿಜೆಪಿ ಸಂಸದೆ ಮೇಧಾ ಕುಲಕರ್ಣಿ ಅವರು, ಮಹಿಳಾ ಮೀಸಲಾತಿ ಮಸೂದೆಯು ಅಭಿವೃದ್ಧಿ ಹೊಂದುತ್ತಿರುವ ಭಾರತದಲ್ಲಿ ಮಹಿಳಾ ಶಕ್ತಿಯನ್ನು ಖಚಿತಪಡಿಸುವುದರಿಂದ ಇದು ನೂತನ ಸಂಸತ್ತಿಗೆ ಒಂದು ಐತಿಹಾಸಿಕ ಕ್ಷಣವಾಗಿದೆ ಎಂದು ಹೇಳಿದ್ದಾರೆ. ಇಡೀ ದೇಶ ಮತ್ತು ಮಹಿಳಾ ಸಮುದಾಯ ಇದನ್ನು ಬೆಂಬಲಿಸುತ್ತಿದೆ ಎಂದು ಹೇಳುತ್ತಾ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ. ದೇಶದಲ್ಲಿ ಮಹಿಳಾ ಸಬಲೀಕರಣಕ್ಕೆ ಇದೊಂದು ಐತಿಹಾಸಿಕ ದಿನ ಎಂದು ಬಿಜೆಪಿ ಸಂಸದೆ ಸಂಧ್ಯಾ ರಾಯ್ ಹೇಳಿದ್ದಾರೆ. ಸಂಸತ್ ಭವನದ ಸಂಕೀರ್ಣದ ಹೊರಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ೨೦೨೯ರ ಚುನಾವಣೆಯಲ್ಲಿ ದೇಶದ ಸ್ತ್ರೀ ಶಕ್ತಿಗೆ ಪ್ರಾತಿನಿಧ್ಯ ಪಡೆಯುವ ಅವಕಾಶ ಸಿಗಲಿದೆ, ದೇಶದ ಮಾತೃಶಕ್ತಿಯ ಪರವಾಗಿ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

*********

ಭಾರತವು 'ಪ್ರಜಾಪ್ರಭುತ್ವದ ಜನನಿ' ಎಂದು ಲೋಕಸಭೆಯ ಬಿಜೆಪಿ ಸಂಸದ ಜಗದಂಬಿಕಾ ಪಾಲ್ ಹೇಳಿದ್ದಾರೆ. ಇಂತಹ ಪ್ರಜಾಪ್ರಭುತ್ವದ ಜನನಿಯಲ್ಲಿ, ೨೦೨೯ರ ಲೋಕಸಭೆ ಚುನಾವಣೆಯಲ್ಲಿ ಮಹಿಳೆಯರ ಪ್ರಾತಿನಿಧ್ಯವು ಶೇಕಡಾ ೩೩ರಷ್ಟು ಇರಲಿದೆ ಎಂದು ಅವರು ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕ್ಷೇತ್ರ ಮರುವಿಂಗಡಣೆ ಮಸೂದೆಯ ಬಗ್ಗೆ ವಿರೋಧ ಪಕ್ಷಗಳು ದೇಶವನ್ನು ದಾರಿ ತಪ್ಪಿಸುತ್ತಿವೆ ಎಂದು ಆರೋಪಿಸಿದರು. ಅಲ್ಲದೆ, ಶೀಘ್ರದಲ್ಲೇ ಕ್ಷೇತ್ರ ಮರುವಿಂಗಡಣಾ ಆಯೋಗವನ್ನು ರಚಿಸಲಾಗುವುದು ಮತ್ತು ಅದು ರಾಜ್ಯಗಳಿಗೆ ಅನುಗುಣವಾಗಿ ಸಮಾನ ಅನುಪಾತದಲ್ಲಿ ಇರಲಿದೆ ಎಂದು ಹೇಳಿದ್ದಾರೆ.

*********

ಜನಗಣತಿ ೨೦೨೭ರ ಮೊದಲ ಹಂತದ ಭಾಗವಾಗಿ 'ಮನೆಪಟ್ಟಿ ಮತ್ತು ವಸತಿ ಗಣತಿ' ಕ್ಷೇತ್ರದ ಕಾರ್ಯಾಚರಣೆಗಳು ಇಂದು ಹಲವಾರು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರಾರಂಭವಾಗಿವೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಗೋವಾ, ಕರ್ನಾಟಕ, ಲಕ್ಷದ್ವೀಪ, ಮಿಜೋರಾಂ, ಒಡಿಶಾ ಮತ್ತು ಸಿಕ್ಕಿಂ ಸೇರಿದಂತೆ ರಾಷ್ಟ್ರ ರಾಜಧಾನಿಯ ಎನ್‌ಡಿಎಂಸಿ ಮತ್ತು ದೆಹಲಿ ಕಂಟೋನ್ಮೆಂಟ್ ಬೋರ್ಡ್ ಪ್ರದೇಶಗಳಲ್ಲಿ ಇಂದಿನಿಂದ ಈ ಪ್ರಕ್ರಿಯೆ ನಡೆಯುತ್ತಿದೆ. ಈ ಅಭಿಯಾನವು ಮುಂದಿನ ತಿಂಗಳ ೧೫ರವರೆಗೆ ಒಟ್ಟು ೩೦ ದಿನಗಳ ಕಾಲ ನಡೆಯಲಿದ್ದು, ಈ ಅವಧಿಯಲ್ಲಿ ತರಬೇತಿ ಪಡೆದ ಎಣಿಕೆದಾರರು ದತ್ತಾಂಶ ಸಂಗ್ರಹಣೆಗಾಗಿ ಮನೆ ಮನೆಗೆ ಭೇಟಿ ನೀಡಲಿದ್ದಾರೆ. ಮೊದಲ ಬಾರಿಗೆ ಪರಿಚಯಿಸಲಾದ 'ಸ್ವಯಂ-ಎಣಿಕೆ' ಸೌಲಭ್ಯಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸುಮಾರು ೧೨ ಲಕ್ಷ ಕುಟುಂಬಗಳು ತಮ್ಮ ವಿವರಗಳನ್ನು ಆನ್‌ಲೈನ್ ಮೂಲಕ ಯಶಸ್ವಿಯಾಗಿ ಸಲ್ಲಿಸಿವೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಸ್ವಯಂ-ಎಣಿಕೆ ಪೂರ್ಣಗೊಳಿಸಿದ ನಿವಾಸಿಗಳು ತಮ್ಮ 'ಸೆಲ್ಫ್ ಎನ್ಯೂಮರೇಶನ್ ಐಡಿ'ಯನ್ನು ಸಿದ್ಧವಾಗಿಟ್ಟುಕೊಳ್ಳಲು ಮತ್ತು ಎಣಿಕೆದಾರರು ಮನೆಗೆ ಬಂದಾಗ ಅದನ್ನು ಹಂಚಿಕೊಳ್ಳಲು ಸೂಚಿಸಲಾಗಿದೆ. ಈ ಸೌಲಭ್ಯವನ್ನು ಬಳಸದವರನ್ನು ಭೌತಿಕ ಎಣಿಕೆಯ ಮೂಲಕ ಈ ವ್ಯಾಪ್ತಿಗೆ ಒಳಪಡಿಸಲಾಗುವುದು.

*********

ರಾಜ್ಯಸಭೆಯ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಮೇಲ್ಮನೆಗೆ ನೂತನವಾಗಿ ಆಯ್ಕೆಯಾದ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದರು. ಪ್ರಮಾಣ ವಚನ ಸ್ವೀಕರಿಸಿದವರಲ್ಲಿ ಬಿಜೆಪಿಯ ನಿತಿನ್ ನಬಿನ್, ತೆರಾಶ್ ಗೌಡಾ, ಜೋಗನ್ ಮೋಹನ್, ಶಿವೇಶ್ ಕುಮಾರ್, ವಿನೋದ್ ಶ್ರೀಧರ್ ತಾವ್ಡೆ, ಸುಜೀತ್ ಕುಮಾರ್, ಲಕ್ಷ್ಮಿ ವರ್ಮಾ ಮತ್ತು ಸಂಜಯ್ ಭಾಟಿಯಾ ಸೇರಿದ್ದಾರೆ. ಇವರಲ್ಲದೆ, ಜೆಡಿಯು ಪಕ್ಷದ ರಾಮ್ ನಾಥ್ ಠಾಕೂರ್, ರಾಷ್ಟ್ರೀಯ ಲೋಕ ಮೋರ್ಚಾದ ಉಪೇಂದ್ರ ಕುಶ್ವಾಹಾ, ಕಾಂಗ್ರೆಸ್‌ನ ಅಭಿಷೇಕ್ ಮನು ಸಿಂಘ್ವಿ, ಫುಲೋ ದೇವಿ ನೇತಮ್, ಕರಮ್‌ವೀರ್ ಸಿಂಗ್ ಬೌಧ್, ಅನುರಾಗ್ ಶರ್ಮಾ, ವೇಮ್ ನರೇಂದ್ರ ರೆಡ್ಡಿ ಮತ್ತು ಯುಪಿಪಿಎಲ್ ಪಕ್ಷದ ಪ್ರಮೋದ್ ಬೋರೋ ಅವರು ಪ್ರಮಾಣ ವಚನ ಸ್ವೀಕರಿಸಿದರು. ಇದೇ ವೇಳೆ, ಇತ್ತೀಚೆಗೆ ನಿಧನರಾದ

ಮೊಹ್ಸಿನಾ ಕಿದ್ವಾಯಿ ಮತ್ತು ಖ್ಯಾತ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ಅವರಿಗೆ ಸದನವು ಶ್ರದ್ಧಾಂಜಲಿ ಅರ್ಪಿಸಿತು. ನಂತರ, ಸದನವನ್ನು ಇಂದಿನ ಮಟ್ಟಿಗೆ ಮುಂದೂಡಲಾಯಿತು.

*********

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯಲ್ಲಿ ಇಂದು ಮುಂಜಾನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಎಂಟು ಜನರು ಮೃತಪಟ್ಟಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ. ಕರ್ನಾಟಕದ ಭಕ್ತರನ್ನು ಹೊತ್ತೊಯ್ಯುತ್ತಿದ್ದ ಟೆಂಪೋ ವಾಹನವು ಚಿಲಕಲಡೋನ ಸಮೀಪ ಲಾರಿಗೆ ಡಿಕ್ಕಿ ಹೊಡೆದಿದ್ದರಿಂದ ಈ ಅಪಘಾತ ಸಂಭವಿಸಿದೆ. ಭಕ್ತರು ಮಂತ್ರಾಲಯದ ದರ್ಶನಕ್ಕಾಗಿ ಪ್ರಯಾಣಿಸುತ್ತಿದ್ದಾಗ, ದುರ್ಘಟನೆ ಸಂಭವಿಸಿದೆ. ಅಪಘಾತದಲ್ಲಿ ಎಂಟು ಜನರು ಸ್ಥಳದಲ್ಲೇ ಮೃತಪಟ್ಟಿದ್ದು, ಗಾಯಗೊಂಡ ಇತರ ಹತ್ತು ಮಂದಿ ಕರ್ನೂಲ್ ಸರ್ಕಾರಿ ಆಸ್ಪತ್ರೆ ಹಾಗೂ ಸಮೀಪದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆಯ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಸ್ಥರಿಗೆ ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಆಸ್ಟ್ರಿಯಾ ಚಾನ್ಸಲರ್ ಡಾ. ಕ್ರಿಶ್ಚಿಯನ್ ಸ್ಟಾಕರ್ ಅವರೊಂದಿಗೆ ಮಾತುಕತೆ ನಡೆಸಿದರು. ಈ ಸಭೆಯಲ್ಲಿ ಉಭಯ ನಾಯಕರು ಪ್ರಾದೇಶಿಕ ಮತ್ತು ಜಾಗತಿಕ ಹಿತಾಸಕ್ತಿಯ ವಿಷಯಗಳ ಬಗ್ಗೆ ಹಾಗೂ ಬಹುಪಕ್ಷೀಯ ವೇದಿಕೆಗಳಲ್ಲಿನ ಸಹಕಾರದ ಬಗ್ಗೆ ವಿಚಾರ ವಿನಿಮಯ ಮಾಡಿಕೊಂಡರು. ಇದಕ್ಕೂ ಮುನ್ನ ಇಂದು ಬೆಳಿಗ್ಗೆ, ಸ್ಟಾಕರ್ ಮತ್ತು ಅವರ ಪತ್ನಿ ಗೆರ್ಡಾ ಸ್ಟಾಕರ್ ಲೆಜೆನ್‌ಸ್ಟೈನ್ ಅವರು ರಾಜಘಾಟ್‌ನಲ್ಲಿ ಮಹಾತ್ಮ ಗಾಂಧೀಜಿ ಅವರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು. ಇದು ಚಾನ್ಸಲರ್ ಸ್ಟಾಕರ್ ಅವರು ಭಾರತದ ಮೊದಲ ಭೇಟಿಯಾಗಿದ್ದು, ಏಷ್ಯಾ ಖಂಡಕ್ಕೆ ಅವರ ಮೊದಲ ಅಧಿಕೃತ ಭೇಟಿಯೂ ಇದಾಗಿದೆ. ಭಾರತ ಮತ್ತು ಆಸ್ಟ್ರಿಯಾ ದೇಶಗಳು ಹಂಚಿಕೊಂಡ ಪ್ರಜಾಸತ್ತಾತ್ಮಕ ಮೌಲ್ಯಗಳಲ್ಲಿ ಬೇರೂರಿರುವ ಆತ್ಮೀಯ, ಸ್ನೇಹಪರ ಮತ್ತು ಬಹುಮುಖಿ ಸಂಬಂಧಗಳನ್ನು

ಹೊಂದಿವೆ. ಚಾನ್ಸಲರ್ ಸ್ಕಾಕರ್ ಅವರ ಈ ಭೇಟಿಯು ನೂತನ ಕ್ಷೇತ್ರಗಳಲ್ಲಿ ಸಹಭಾಗಿತ್ವವನ್ನು ಇನ್ನಷ್ಟು ಆಳವಾಗಿಸಲು ಮತ್ತು ವಿಸ್ತರಿಸಲು ಎರಡೂ ದೇಶಗಳು ಹೊಂದಿರುವ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

*********

ಛತ್ತೀಸ್‌ಗಢ ರಾಜ್ಯದಲ್ಲಿ ಏಕರೂಪ ನಾಗರಿಕ ಸಂಹಿತೆ-ಯುಸಿಸಿ ಯನ್ನು ಜಾರಿಗೆ ತರುವ ನಿಟ್ಟಿನಲ್ಲಿ, ಅದರ ಕರಡು ಸಿದ್ಧಪಡಿಸಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಲು ಛತ್ತೀಸ್‌ಗಢ ಸರ್ಕಾರ ನಿರ್ಧರಿಸಿದೆ. ರಾಯ್‌ಪುರದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಧಾರ್ಮಿಕ ಮತ್ತು ಲಿಂಗ ಸಮಾನತೆಯನ್ನು ಉತ್ತೇಜಿಸಲು ಕಾನೂನುಗಳನ್ನು ಸರಳೀಕರಿಸುವುದು ಈ ಕ್ರಮದ ಉದ್ದೇಶವಾಗಿದೆ. ನಿವೃತ್ತ ನ್ಯಾಯಾಧೀಶರಾದ ರಂಜನಾ ಪ್ರಕಾಶ್ ದೇಸಾಯಿ ಈ ಸಮಿತಿಯ ನೇತೃತ್ವ ವಹಿಸಲಿದ್ದಾರೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಪಂಜಾಬ್ ಕಿಂಗ್ಸ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಐದು ವಿಕೆಟ್‌ಗಳ ಜಯ ಸಾಧಿಸಿತು.

*****END****